# ತುಮಕೂರು ವಿಶ್ವವಿದ್ಯಾನಿಲಯ

**ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103**

ಸಂಖ್ಯೆ:ತುವಿ:ಶೈವಿ:ಪಿ.ಜಿ:2026-27/1111 ದಿನಾಂಕ:24.06.2026

**ಸುತ್ತೋಲೆ**

ವಿಷಯ: ಬೇಡಿಕೆಯಿರುವ ಸ್ನಾತಕೋತ್ತರ ವಿಭಾಗ/ಕೋರ್ಸ್‌ಗಳ ಪ್ರವೇಶಾತಿಗೆ ಮತ್ತು ಪ್ರಸ್ತುತವಿರುವ ಸ್ನಾತಕೋತ್ತರ ವಿಭಾಗಗಳ ಪ್ರವೇಶ ಮಿತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಮಾಹಿತಿ ನೀಡುವ ಕುರಿತು.

ಉಲ್ಲೇಖ:1. ಸಿಂಡಿಕೇಟ್ ಸಭಾ ನಿರ್ಣಯ ದಿನಾಂಕ:24.01.2026

2. ಮಾನ್ಯಕುಲಪತಿಯವರ ಅನುಮೋದನೆ ದಿನಾಂಕ:23.06.2026 (ಕಂಡಿಕೆ-22)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(01)ರ ಸಿಂಡಿಕೇಟ್ ಸಭಾ ನಿರ್ಣಯದಂತೆ ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲಗಳನ್ನು ಹೆಚ್ಚಿಸುವ ಸಂಬಂಧ ಬೇಡಿಕೆಯಿರುವಂತಹ ಸ್ನಾತಕೋತ್ತರ ವಿಭಾಗಗಳನ್ನು ಪ್ರಾರಂಭಿಸುವ ಹಾಗೂ ಪ್ರಸ್ತುತ ಲಭ್ಯವಿರುವ ಸ್ನಾತಕೋತ್ತರ ವಿಭಾಗ/ಕೋರ್ಸ್‌ಗಳ ಪ್ರವೇಶಮಿತಿಯನ್ನು ಹೆಚ್ಚಿಸಿ ಅದರಿಂದ ಬರುವಂತಹ ಶುಲ್ಕದಿಂದ ಆಂತರಿಕ ಸಂಪನ್ಮೂಲಗಳ ಬೆಳವಣಿಗೆಯಾಗುವ ಸಂಬಂಧ ಪ್ರಸ್ತುತ ಲಭ್ಯವಿರುವ ಮೂಲಭೂತ ಸೌಲಭ್ಯಗಳಡಿಯಲ್ಲಿಯೇ ಬೇಡಿಕೆಯಿರುವಂತಹ ಸ್ನಾತಕೋತ್ತರ ವಿಭಾಗ/ಕೋರ್ಸ್‌ಗಳನ್ನು ಪ್ರಾರಂಭಿಸುವ ಸಂಬಂಧ ಪ್ರಸ್ತಾವನೆಯನ್ನು ಮತ್ತು ಪ್ರಸ್ತುತವಿರುವ ವಿಭಾಗ/ಕೋರ್ಸ್‌ಗಳ ಹಿಂದಿನ ಮೂರು ವರ್ಷಗಳ ಪ್ರವೇಶ ಮಿತಿ, ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಮಾಹಿತಿ ಮತ್ತು ನಿಗದಿಪಡಿಸಿರುವ ಪ್ರವೇಶ ಶುಲ್ಕದ ಮಾಹಿತಿ, ಈ ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ 10 ಕ್ಕಿಂತಲೂ ಕಡಿಮೆ ವಿದ್ಯಾರ್ಥಿಗಳು ಪ್ರವೇಶ ಪಡೆದಿರುವ ವಿಭಾಗ/ಕೋರ್ಸ್‌ಗಳನ್ನು ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಮುಂದುವರೆಸಬೇಕಾ ಅಥವಾ ಬೇಡವಾ, ಪ್ರತಿವರ್ಷವೂ ಅಧಿಸೂಚನೆಯನ್ನು ಹೊರಡಿಸುತ್ತಿರುವ ಕೆಲವು ವಿಭಾಗ/ಕೋರ್ಸ್‌ಗಳಿಗೆ ವಿದ್ಯಾರ್ಥಿಗಳು ಪ್ರವೇಶವನ್ನು ಪಡೆಯುತ್ತಿಲ್ಲ ಅಂತಹ ಕೋರ್ಸ್‌ಗಳನ್ನು ಪ್ರಸ್ತುತ ಸಾಲಿನ ಅಧಿಸೂಚನೆಯಲ್ಲಿ ಸೇರಿಸದಿರುವ ಕುರಿತು ಈ ಎಲ್ಲಾ ಮಾಹಿತಿಯನ್ನು ದಿನಾಂಕ:30.06.2026 ರ ಒಳಗಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

ಆದೇಶದ ಮೇರೆಗೆ

ಉಪಕುಲಸಚಿವರು
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ

ಗೆ,

1. ಸಂಯೋಜಕರು, ಶಿರಾ ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
2. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತಿಪಟೂರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಕಚೇರಿ ಪ್ರತಿ.